10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಯೋಜನಾ ಇಲಾಖೆ.
11. ನಿರ್ದೇಶಕರು, ಎಡಿಬಿ ವಿಭಾಗ ಇವರ ಆಪ್ತ ಸಹಾಯಕರು, ಯೋಜನಾ ಇಲಾಖೆ.
12. ಬಿಡಿ ಪ್ರತಿಗಳು.

ಶಾಶ್ವತ ಸಿಬ್ಬಂದಿ ನೇಮಕಾತಿ

1591(1962); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಭಾಲ್ಕಿ ತಾಲ್ಲೂಕಿನ ಗಡಿಭಾಗದ ಮೆಹಕರ್ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಶಾಶ್ವತವಾಗಿ ವೈದ್ಯಾಧಿಕಾರಿಗಳಿಲ್ಲದೇ ಹಾಗೂ ಯಾವುದೇ ಮೂಲಭೂತ ಸೌಲಭ್ಯಗಳಿಲ್ಲದೇ ಇರುವುದರಿಂದ ಈ ಭಾಗದ ಜನರು ಗುಣಮಟ್ಟದ ಆರೋಗ್ಯ ಸೌಲಭ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಇದನ್ನು ಸರಿಪಡಿಸಲು ಹಾಗೂ ಈ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ

ಆ) ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ. ಸದರಿ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಲು ಸಾಧ್ಯವಿರುವುದಿಲ್ಲ.